ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ಯವರ ನ್ಯಾಯಾಲಯ, ಕುಂದಾಪುರ
ಸಿ.ಸಿ. ನಂಬ್ರ:2556/2022

ಚಾಸಾ:3 ಪ್ರಾಸಾ:3

ದಿನಾಂಕ: 30.08.2025

| | | |
|---|---|---|
| ವಾಗ್ಮೂಲದವರ ಹೆಸರು | : | ಶ್ರೀ ರಾಘವೇಂದ್ರ ಕೊಠಾರಿ |
| ತಂದೆಯ ಹೆಸರು | : | ವಿಜಯ ಕೊಠಾರಿ |
| ವಯಸ್ಸು | : | 38 ವರ್ಷ |
| ಉದ್ಯೋಗ | : | ಚಾಲಕ |
| ವಾಸ ಸ್ಥಳ | : | ಬೇಳೂರು |

ಸಾಕ್ಷಿಯನ್ನು ಪ್ರಮಾಣೀಕರಿಸಲಾಯಿತು.

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ.ರವರಿಂದ:**

ನನಗೆ ಆರೋಪಿಯ ಪರಿಚಯ ಇಲ್ಲ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಪೊಲೀಸರಿಗೆ ಯಾವುದೇ ಹೇಳಿಕೆ ನೀಡಿಲ್ಲ. ಸಾಕ್ಷಿ ನಿಪಿ-2 ರಿಂದ 4 ರಲ್ಲಿ ತನ್ನ ಸಹಿಗಳನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-2(ಬಿ) ರಿಂದ 4(ಬಿ) ಎಂದು ಗುರುತಿಸಲಾಯಿತು. ನಾನು ಬೈಕಿನಲ್ಲಿ ಹೋಗುತ್ತಿದ್ದಾಗ ಪೊಲೀಸರು ಬೈಕನ್ನು ನಿಲ್ಲಿಸಿ ಕೆಲವು ದಾಖಲೆಗಳಿಗೆ ಸಹಿ ಪಡೆದಿರುತ್ತಾರೆ. ಅದರಲ್ಲಿ ಬರೆದಿರುವ ವಿಚಾರಗಳು ನನಗೆ ತಿಳಿದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಕ್ಕೆ ಪಡೆದಿಲ್ಲ. ಸಾಕ್ಷಿ ನಿಪಿ-5 ರಲ್ಲಿ ತನ್ನನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿ ನಿಪಿ-6ನ್ನು ನೋಡಿ ಗುರುತಿಸಿಲ್ಲ.

**(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಗೆ ವಿರುದ್ಧವಾಗಿ ಸಾಕ್ಷಿ ನುಡಿದಿದ್ದರಿಂದ ಮಾನ್ಯ ಸ.ಸ.ಅ.ರವರು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ವಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.)**

**ವಾಟೀ ಸವಾಲು: ಮಾನ್ಯ ಸ.ಸ.ಅ.ರವರಿಂದ:**

ದಿ:27.08.2022 ರಂದು ಮಧ್ಯಾಹ್ನ 1 ಗಂಟೆ ಸಮಯಕ್ಕೆ ಬೇಳೂರು ಗ್ರಾಮದ ಮುಳ್ಳುಗುಡ್ಡೆಯಿಂದ ಸ್ವಲ್ಪ ಮುಂದೆ ಗಣಪತಿ ದೇವಸ್ಥಾನದ ಹತ್ತಿರ ನನ್ನ ಎದುರಿನಲ್ಲಿ ಪಲ್ಸರ್ ವಾಹನ ನಂ.ಕೆಎ-20/ಇಏ-5282 ದ್ವಿಚಕ್ರ ವಾಹನವನ್ನು ಆರೋಪಿ ಹೆಂಡತಿ ಶಾಂಭವಿ ಹಾಗೂ ಮಗು ಶ್ರೇಣಿಕಾ ಎಂಬುವವರೊಂದಿಗೆ ಅತೀವೇಗ ಹಾಗೂ ನಿರ್ಲಕ್ಷತನದಿಂದ ಚಲಾಯಿಸು ಬರುತ್ತಿದ್ದು, ರಸ್ತೆಯಲ್ಲಿದ್ದ

ಹಾವು ನ್ನು ನೋಡಿ ಬ್ರೇಕ್ ಹಾಕಿದ ಪರಿಣಾಮ ಮೋಟಾರು ಸೈಕಲ್ ಸವಾರರೆಲ್ಲರೂ ರಸ್ತೆಗೆ ಬಿದಿದ್ದು, ಹಿಂಬದಿ ಸವಾರರಾದ ಶಾಂಭವಿಗೆ ತಲೆಗೆ, ಭುಜಕ್ಕೆ ತೀವ್ರ ಸ್ವರೂಪದ ಗಾಯಗಳಾಗಿದ್ದು, ಅವರನ್ನು ಆರೋಪಿ ಮತ್ತು ಮಗುವಿನೊಂದಿಗೆ ಎನ್. ಆರ್ ಆಚಾರ್ಯ ಆಸ್ಪತ್ರೆಗೆ ಕರೆದುಕೊಂಡು ಹೋಗಿರುತ್ತಾರೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ದಿಃ30.08.2022 ರಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಹೇಳಿಕೆಯನ್ನು ನಿಪಿ.10 ಎಂದು ಗುರುತಿಸಲಾಯಿತು.

ಪೊಲೀಸರು ಘಟನಾ ಸ್ಥಳಕ್ಕೆ ದಿಃ30.08.2022 ರಂದು ಭೇಟಿ ನೀಡಿದಾಗ ಚಾಸಾ-1ರವರು ಸ್ಥಳವನ್ನು ತೋರಿಸಿದ್ದು, ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಬೆಳಿಗ್ಗೆ 10 ರಿಂದ 10-30ರವರೆಗೆ ಪಂಚನಾಮೆ ಮತ್ತು ನಕ್ಷೆ ತಯಾರಿಸಿ ಪೋಟೋ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಆರೋಪಿ ಮೇಲೆ ಹೇಳಿದ ವಾಹನವನ್ನು ಠಾಣೆಗೆ ತಂದು ಹಾಜರುಪಡಿಸಿದ್ದು, ಅದನ್ನು 11.15 ರಿಂದ 11.45ರವರೆಗೆ ವಶಕ್ಕೆ ಪಡೆದು ಪೋಟೋ ತೆಗೆದು ವಶಕ್ಕೆ ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ಶಾಂಭವಿರವರನ್ನು ಹೆಚ್ಚಿನ ಚಿಕಿತ್ಸೆಗಾಗಿ ಮಣಿಪಾಲದ ಕೆ ಎಮ್ ಸಿ ಆಸ್ಪತ್ರೆಗೆ ದಾಖಲಿಸಿದ್ದು,ಆಕೆ ಚಿಕಿತ್ಸೆ ಫಲಕಾರಿಯಾಗದೆ ದಿಃ02.09.2022 ರ ರಾತ್ರಿ 9.50 ಕ್ಕೆ ಮೃತಪಟ್ಟಿದ್ದು, ಈ ವಿಚಾರವಾಗಿ ನಾನು ದಿಃ03.09.2022 ರಂದು ಪೊಲೀಸರು ಮರುಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಮರು ಹೇಳಿಕೆಯನ್ನು ನಿಪಿ.11 ಎಂದು ಗುರುತಿಸಲಾಯಿತು.

ನಾನು ಅಪಘಾತದ ಪ್ರತ್ಯಕ್ಷದರ್ಶಿಯಾಗಿದ್ದು, ಆರೋಪಿಯ ಅತೀವೇಗ ಹಾಗೂ ನಿರ್ಲಕ್ಷತನದ ಚಾಲನೆಯಿಂದಲೇ ಅಪಘಾತವಾಗಿದೆ ಎಂದು ತಿಳಿದಿದ್ದರೂ ಸಹ ಆರೋಪಿ ನನ್ನ ಪರಿಚಯಸ್ಥನಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ವಾಟೀ ಸವಾಲುಃ ಆರೋಪಿತರ ಪರ ವಕೀಲರು ವಾಟೀ ಸವಾಲು ಇಲ್ಲ ಎಂದು ನುಡಿದಿರುತ್ತಾರೆ.**

**ಮರು ವಿಚಾರಣೆಃ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿ ಸರಿ ಇದೆ

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು**
**ಪ್ರ. ದ. ನ್ಯಾ. ದಂ. ಕುಂದಾಪುರ**